**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸುನೀಲ್ ವಲ್ಯಾಪುರ್ ಇವರು ನಿಯಮ 72 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ**

******

**ಸೂಚನೆ:-**

"ಎಲೆಕ್ಟ್ರಿಕ್ ವಾಹನಗಳ ಖರೀದಿಗೆ ಉತ್ತೇಜನ ನೀಡಲು ಸರ್ಕಾರವು ಹಲವಾರು ಯೋಜನೆಗಳನ್ನು ರೂಪಿಸುತ್ತಿರುವುದರೊಂದಿಗೆ ವಿವಿಧ ಪ್ರದೇಶಗಳಲ್ಲಿ ಚಾರ್ಜಿಂಗ್ ಸ್ಟೇಶನ್‌ಗಳನ್ನು ಪ್ರಾರಂಭಿಸುತ್ತಿದ್ದು, ಅದರಂತೆ, ವಿಧಾನಸೌಧ ಆವರಣದಲ್ಲಿಯು ಸಹ ಚಾರ್ಜಿಂಗ್ ಸ್ಟೇಶನ್ ಅನ್ನು ಅಳವಡಿಸಿರುವುದು ಸರಿ ಅಷ್ಟೆ. ಆದರೆ, ಸದರಿ ಚಾರ್ಜಿಂಗ್ ಸ್ಟೇಶನ್ ಸುತ್ತ ಮುತ್ತಲು ದ್ವಿಚಕ್ರ ವಾಹನ ಮತ್ತು ಇತರ ವಾಹನಗಳ ನಿಲುಗಡೆವಹಿಸುತ್ತಿರುವ ಹಿನ್ನಲೆಯಲ್ಲಿ, ವಿಧಾನಸೌಧಗೆ ಬರುವ ಎಲೆಕ್ಟ್ರಿಕ್ ವಾಹನಗಳ(ಕಾರ್)ಗಳಿಗೆ ಚಾರ್ಜ್ ಮಾಡಲು ತುಂಬ ಅನಾನುಕೂಲವಾಗುತ್ತಿದೆ. ಆದುದರಿಂದ, ಸದರಿ ಚಾರ್ಜಿಂಗ್ ಸ್ಟೇಷನ್ ಸುತ್ತ ಮುತ್ತ ಬೇರೆ ವಾಹನಗಳಿಗೆ ನಿಲುಗಡೆಗೆ ನಿಶೇಧಿಸಿ ಕೇವಲ ಎಲೆಕ್ಟ್ರಿಕ್ ಕಾರುಗಳ ನಿಲುಗಡೆಗೆ ಮೀಸಲಿಟ್ಟು, ವಿಧಾನಸೌಧಗೆ ಬರುವ ಎಲೆಕ್ಟ್ರಿಕ್ ವಾಹನಗಳ ಚಾರ್ಜಿಂಗ್ ಗೆ ಅನುಕೂಲ ಮಾಡಿಕೊಡುವ ಕುರಿತು ಸರ್ಕಾರದ ಗಮನ ಸೆಳೆಬಯಸುತ್ತೇನೆ"

**ಹೇಳಿಕೆ:-**

ಎಲೆಕ್ಟ್ರಿಕ್ ವಾಹನಗಳ ಖರೀದಿಗೆ ಉತ್ತೇಜನ ನೀಡಲು ಸರ್ಕಾರವು ಹಲವಾರು ಯೋಜನೆಗಳನ್ನು ರೂಪಿಸುವುದರೊಂದಿಗೆ ವಿವಿಧ ಪ್ರದೇಶಗಳಲ್ಲಿ ಚಾರ್ಜಿಂಗ್ ಸ್ಟೇಶನ್‌ಗಳನ್ನು ನಿರ್ಮಿಸಲಾಗುತ್ತಿದೆ. ಅದರಂತೆ, ಎಲೆಕ್ಟ್ರಿಕ್ ವಾಹನಗಳಿಗೆ ಉತ್ತೇಜನ ನೀಡುವ ಸಲುವಾಗಿ ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡದಲ್ಲಿಯೂ ಸಹ ಎಲೆಕ್ಟ್ರಿಕ್ ಚಾರ್ಜಿಂಗ್ ಸ್ಟೇಶನ್‌ಗಳನ್ನು ಅಳವಡಿಸಲಾಗಿರುತ್ತದೆ.

ವಿಧಾನಸೌಧದ ಈಶಾನ್ಯ ಭಾಗದ ಗೇಟ್-4ರ ಬಳಿಯ ಪಾರ್ಕಿಂಗ್ ಸ್ಥಳದಲ್ಲಿ ಚಾರ್ಜಿಂಗ್ ಸ್ಟೇಶನ್ ಅನ್ನು ಅಳವಡಿಸಲಾಗಿದ್ದು, ಇಲ್ಲಿ ಸಚಿವಾಲಯದ ಅಧಿಕಾರಿ / ಸಿಬ್ಬಂದಿಗಳು ತಮ್ಮ ಎಲೆಕ್ಟ್ರಿಕ್ ವಾಹನಗಳಿಗೆ ಸುಗಮ ರೀತಿಯಲ್ಲಿ ಚಾರ್ಜಿಂಗ್ ಸೌಲಭ್ಯವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಆದರೂ ಸಹ, ಚಾರ್ಜಿಂಗ್ ಸ್ಟೇಶನ್ ಗೆ ಹೊಂದಿಕೊಂಡಿರುವ ಆವರಣದಲ್ಲಿ ಎಲೆಕ್ಟ್ರಿಕ್ ವಾಹನಗಳನ್ನು ಹೊರತು ಪಡಿಸಿ, ಇತರ ವಾಹನಗಳನ್ನು ನಿಲುಗಡೆ ಮಾಡದಂತೆ ಕ್ರಮವಹಿಸಿ, ಎಲೆಕ್ಟ್ರಿಕ್ ವಾಹನಗಳ ಚಾರ್ಜಿಂಗ್‌ಗೆ ಅನುಕೂಲ ಮಾಡಿಕೊಡುವ ಕುರಿತು ಸೂಕ್ತ ಕ್ರಮ ವಹಿಸಲಾಗುವುದು.

ಸಂಖ್ಯೆ: ಸಿಆಸುಇ 11 ಡಿಇವಿ 2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**